**JULY 24, 2025**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ: ಮೇಲುಸ್ತುವಾರಿಗೆ ಉನ್ನತಮಟ್ಟದ ಸಮಿತಿ ರಚಿಸಲು ತಿರ್ಮಾನ.**

- **ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ ವಿತರಿಸುವ ಅಂಬೇಡ್ಕರ್ ಕಾರ್ಮಿಕ ಸಹಾಯಹಸ್ತ ಯೋಜನೆ, ರಾಜ್ಯದ ಎಲ್ಲ ಜಿಲ್ಲೆಗಳಿಗೂ ವಿಸ್ತರಣೆ.**

- **ರಾಜ್ಯದ ವಿವಿಧೆಡೆ ಮುಂದುವರಿದ ಆರ್ಥಿಕ ಸೇರ್ಪಡೆಪರಿಪೂರ್ಣತೆ ಅಭಿಯಾನ: ಕೇಂದ್ರ ಸರ್ಕಾರದ ಯೋಜನೆಗಳ ಕುರಿತು ಜಾಗೃತಿ.**

- **ರಾಜ್ಯದಲ್ಲಿಯೇ ಮೊಟ್ಟಮೊದಲ ಬಾರಿ ರೋಬೋಟಿಕ್ ಸ್ಕ್ಯಾವೆಂಜರ್ ಬ್ಯಾಂಡಿಕೂಟ್ ಯಂತ್ರ, ಬಳಕೆಗೆ ತಂದ ರಾಯಚೂರ ಮಹಾನಗರಪಾಲಿಕೆ.**

**ಈಗ ವಾರ್ತೆಗಳ ವಿವರ**

*******

**ಜಾತಿ ತಾರತಮ್ಯ ನಿವಾರಣೆ ಮಾಡುವುದು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಮುಖ್ಯ ಉದ್ದೇಶ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕುರಿತಾದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಸೆಪ್ಟಂಬರ್ 22 ರಿಂದ ಅಕ್ಟೋಬರ್ 7 ರವರೆಗೆ 15 ದಿನಗಳ ಕಾಲ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಯಲಿದ್ದು, ಅಕ್ಟೋಬರ್ ಕೊನೆಯ ಒಳಗಾಗಿ ಸಮೀಕ್ಷಾ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ ಎಂದರು. ರಾಜ್ಯದ ಎಲ್ಲಾ 7 ಕೋಟಿ ಜನರ ಸಮೀಕ್ಷೆ ನಡೆಸಲಾಗುವುದು. ರಾಜ್ಯದ ಪ್ರತಿಯೊಬ್ಬರ ಆರ್ಥಿಕ ಪರಿಸ್ಥಿತಿ, ಜಮೀನು ಇದೆಯೇ ಇಲ್ಲವೇ ಸೇರಿದಂತೆ ಸಮಗ್ರ ಸಮೀಕ್ಷೆ ನಡೆಯಬೇಕು. ಈ ಸಮೀಕ್ಷೆ ವರದಿ ಮುಂದಿನ ಬಜೆಟ್ ಸಿದ್ಧಪಡಿಸುವ ಸಂದರ್ಭದಲ್ಲಿ ಆಧಾರವಾಗಲಿದೆ ಎಂದು ಹೇಳಿದರು. ಈ ಬಾರಿಯ ಸಮೀಕ್ಷೆ ದೇಶದಲ್ಲೇ ಮಾದರಿ ಸಮೀಕ್ಷೆಯಾಗಬೇಕು. ಸಮೀಕ್ಷೆ ಕಾರ್ಯದ ಮೇಲುಸ್ತುವಾರಿಗೆ ಉನ್ನತಮಟ್ಟದ ಸಮಿತಿ ರಚಿಸಲು ತಿರ್ಮಾನ ಕೈಗೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು.**

*******

ಉದ್ದಿಮೆಗಳ ಸ್ಥಾಪನೆ ಮೂಲಕ ವಿಜಯಪುರ ಜಿಲ್ಲೆಯನ್ನು ಕೈಗಾರಿಕಾ ಶಕ್ತಿ ಕೇಂದ್ರವನ್ನಾಗಿ ರೂಪಿಸಲಾಗುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಹೇಳಿದ್ದಾರೆ. 'ಇನ್ವೆಸ್ಟ್ ಕರ್ನಾಟಕ ಸಮಾವೇಶದ' ಮೂಲಕ ಜಿಲ್ಲೆಗೆ 42,000 ಕೋಟಿ ರೂಪಾಯಿ ಬಂಡವಾಳ ಹರಿದು ಬಂದಿದೆ. ಸುಜ್ಲಾನ್‌ನಿಂದ 30,000 ಕೋಟಿ ರೂಪಾಯಿ ಹೂಡಿಕೆಯೊಂದಿಗೆ ಪವನ ವಿದ್ಯುತ್ ಘಟಕ, ಸೌರ ವಿದ್ಯುತ್ ಯೋಜನೆಗಾಗಿ ರೆನ್ಯೆಸಾನ್ಸ್‌ನಿಂದ 6,000 ಕೋಟಿ ರೂಪಾಯಿ ಬಂಡವಾಳ ಹೂಡಿಕೆಯಾಗುತ್ತಿದೆ. ಇಟ್ಟಂಗಿಹಾಳ ಸಮೀಪ ಮೈಸೂರು ಸ್ಯಾಂಡಲ್ ಸೋಪ್ ಉತ್ಪಾದನಾ ಘಟಕ, ಮುಳವಾಡದಲ್ಲಿ 300 ಎಕರೆ ವಿಸ್ತಾರದ ಉತ್ಪಾದನಾ ಕ್ಲಸ್ಟರ್ ನಿರ್ಮಾಣ ಮಾಡಲಾಗುತ್ತಿದೆ. ಇದರಿಂದ ಉದ್ಯೋಗವಕಾಶಗಳ ಬಾಗಿಲು ತೆರೆಯಲಿವೆ ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಮಾಹಿತಿ ನೀಡಿದ್ದಾರೆ.

*******

ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ ಕಾರ್ಡ ವಿತರಿಸುವ ಅಂಬೇಡ್ಕರ್ ಕಾರ್ಮಿಕ ಸಹಾಯಹಸ್ತ ಯೋಜನೆಯನ್ನು ರಾಜ್ಯದ ಎಲ್ಲ ಜಿಲ್ಲೆಗಳಿಗೂ ವಿಸ್ತರಿಸಲಾಗುವುದು ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ತಿಳಿಸಿದ್ದಾರೆ. ವಿಜಯಪುರದಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಸಂಘಟಿತ ವಲಯಗಳ ಕಾರ್ಮಿಕರನ್ನು ಗುರುತಿಸಿ, ಉಚಿತವಾಗಿ ನೋಂದಾಯಿಸಿ ವಿವಿಧ ಸೌಲಭ್ಯಗಳನ್ನೊಳಗೊಂಡ ಸ್ಮಾರ್ಟ್ ಕಾರ್ಡ್ ವಿತರಿಸುವ ಯೋಜನೆ ಇದಾಗಿದೆ ಎಂದರು. ಆರಂಭದಲ್ಲಿ ರಾಜ್ಯದಲ್ಲಿನ 26 ವರ್ಗಗಳ ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಲಾಗಿತ್ತು. ಹೊಸದಾಗಿ ಹಿಂದುಳಿದ ವರ್ಗಗಳ ಪಾರಂಪರಿಕ ವೃತ್ತಿಯಲ್ಲಿ ತೊಡಗಿರುವ 38 ವರ್ಗಗಳು ಹಾಗೂ ಹಿಂದುಳಿದ ವರ್ಗಗಳ ಅಲೆಮಾರಿ ಹಾಗೂ ಅರೆಅಲೆಮಾರಿ ಪಂಗಡದ ಕುಲಕಸುಬಿನಲ್ಲಿ ತೊಡಗಿರುವ 27 ವರ್ಗಗಳ ಕಾರ್ಮಿಕರು ಸೇರಿದಂತೆ ಒಟ್ಟು 91 ವರ್ಗಗಳ ಕಾರ್ಮಿಕರನ್ನು ಗುರುತಿಸಿ ಸೌಲಭ್ಯ ನೀಡಲಾಗುವುದು ಎಂದು ಹೇಳಿದರು.

*******

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 8 ಸಾವಿರ ಮನೆಗಳನ್ನು ನಿರ್ಮಾಣ ಮಾಡಲಾಗುತ್ತಿದ್ದು, ಅಲ್ಪಸಂಖ್ಯಾತರು ವಾಸಿಸುವ ಪ್ರದೇಶಗಳ ಅಭಿವೃದ್ಧಿಗೆ ವಿಶೇ ' ಅನುದಾನ ನೀಡಲಾಗುತ್ತಿದೆ ಎಂದು ವಸತಿ ಖಾತೆ ಸಚಿವ ಜಮೀರ ಅಹ್ಮದ್ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲದಲ್ಲಿ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ನೆಲಮಂಗಲದಲ್ಲಿ ಶಾದಿ ಮಹಲ್ ನಿರ್ಮಾಣಕ್ಕೆ 1 ಕೋಟಿ ರೂಪಾಯಿ ಅನುದಾನ ನೀಡಲಾಗುವುದು. ನೆಲಮಂಗಲದ ಅಂಬೇಡ್ಕರ್ ನಗರವನ್ನು ಗುಡಿಸಲು ಮುಕ್ತ ಮಾಡಲಾಗುವದು ಎಂದು ತಿಳಿಸಿದರು.

*******

ಸರ್ಕಾರ 6000 ಆಹಾರ ಸಂಸ್ಕರಣಾ ಉದ್ದಿಮೆಗಳನ್ನು ಸ್ಥಾಪಿಸಲು ತೀರ್ಮಾನಿಸಿದ್ದು, ಪಿ.ಎಮ್.ಎಫ್.ಎಮ್.ಇ. ಯೋಜನೆಯಡಿ 15 ಲಕ್ಷದವರೆಗೂ ಸಹಾಯಧನ ಪಡೆಯಬಹುದು ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.

ಚೆಲುವರಾಯಸ್ವಾಮಿ ಹೇಳಿದ್ದಾರೆ. 'ಪ್ರಧಾನ ಮಂತ್ರಿ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ' ಅರಿವು ಮೂಡಿಸುವ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕೇಂದ್ರ ಸರ್ಕಾರ 6 ಲಕ್ಷ ಮತ್ತು ರಾಜ್ಯ ಸರ್ಕಾರ 9 ಲಕ್ಷ ರೂಪಾಯಿಗಳನ್ನು ಸಬ್ಸಿಡಿ ರೂಪದಲ್ಲಿ ನೀಡುತ್ತವೆ. ಯುವ ರೈತರು ಆಹಾರ ಸಂಸ್ಕರಣಾ ಉದ್ದಿಮೆ ಯೋಜನೆ ಅಳವಡಿಸಿಕೊಂಡು ಉದ್ಯೋಗ ಸೃಷ್ಟಿಸಲು ಸಾಧ್ಯವಿದೆ ಎಂದರು. ಪಾರಂಪರಿಕ ಕೃಷಿ ಪದ್ಧತಿ ಜೊತೆ ಕನಿ ೄ ಒಂದು ಎಕರೆಯಲ್ಲಿ ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಂಡರೆ ಕಡಿಮೆ ವೆಚ್ಚದಲ್ಲಿ ಅಧಿಕ ಇಳುವರಿ ತೆಗೆಯಬಹುದು ಎಂದು ಸಚಿವರು ಹೇಳಿದರು.

*******

ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್ ವೇ ನಲ್ಲಿದ್ದ ಸಮಸ್ಯೆ ನಿವಾರಣೆಗೆ ಕೇಂದ್ರ ಸರ್ಕಾರ ಸುಮಾರು 712 ಕೋಟಿ ರೂಪಾಯಿಗಳ ಸ್ಟ ಹಣ ಬಿಡುಗಡೆ ಮಾಡಿದೆ ಎಂದು ಸಂಸದ ಡಾಕ್ಟರ್ ಸಿ.ಎನ್.ಮಂಜುನಾಥ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ನೀಡಿರುವ ಅವರು, ದಶಪಥ ರಸ್ತೆಯಲ್ಲಿ ನೂತನವಾಗಿ ಎಂಟ್ರಿ-ಎಕ್ಸಿಟ್, ರೈಲ್ವೇ ಸೇತುವೆ, ಅಂಡರ್ ಪಾಸ್, ಓವರ್ ಪಾಸ್, ಸರ್ವೀಸ್ ರಸ್ತೆ ನಿರ್ಮಾಣ, ಸೇರಿದಂತೆ ಅನೇಕ ಸೌಲಭ್ಯಗಳನ್ನು ಒದಗಿಸಲಾಗುತ್ತಿದ್ದು, ಇದರಿಂದ ಪ್ರಯಾಣಿಕರಿಗೆ ಸಾಕ ಸ್ಟ ಅನುಕೂಲವಾಗಲಿದೆ ಎಂದು ತಿಳಿಸಿದ್ದಾರೆ.

*******

ಏರೋಸ್ಪೇಸ್ ಪಾರ್ಕ ಯೋಜನೆಯನ್ನು ಉತ್ತರ ಕರ್ನಾಟಕದ ಬೆಳಗಾವಿ ಸೇರಿದಂತೆ ಯಾವುದಾದರೂ ಜಿಲ್ಲೆಗಳಿಗೆ ಸ್ಥಳಾಂತರಿಸಬೇಕು ಎಂದು ಸಂಸದ ಈರಣ್ಣ ಕಡಾಡಿ ಆಗ್ರಹಿಸಿದ್ದಾರೆ.ಈ ಕುರಿತು ಮುಖ್ಯಮಂತ್ರಿ ಅವರಿಗೆ ಪತ್ರ ಬರೆದಿರುವ ಅವರು, ರಾಜ್ಯಕ್ಕೆ ಬಂದಿರುವ ಯೋಜನೆಯನ್ನು ಬೇರೆ ಕಡೆಗೆ ಸ್ಥಳಾಂತರವಾಗಲು ಬಿಡಬಾರದು. ಬೆಳಗಾವಿ ಸೇರಿದಂತೆ ಉತ್ತರ ಕರ್ನಾಟಕದ ಯಾವುದಾದರೂ ಜಿಲ್ಲೆಗಳಲ್ಲಿ ಅಭಿವೃದ್ಧಿಗೆ ಹೆಚ್ಚು ಸ್ವೀಕಾರ್ಹ ಮತ್ತು ಸೂಕ್ತ ಪ್ರದೇಶಕ್ಕೆ ಸ್ಥಾಪನೆ ಆಗುವಂತೆ ನೋಡಿಕೊಳ್ಳುವುದು ರಾಜ್ಯ ಸರ್ಕಾರದ ಅಭಿವೃದ್ಧಿ ಪರವಾದ ಜವಾಬ್ದಾರಿ ಎಂದು ತಿಳಿಸಿದ್ದಾರೆ.

*******

ಈಗ ಪ್ರಕಟಣೆ, ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು

ಪ್ರಕಟಣೆ-1 ನಿಮಿಷ 12 ಸೆಕೆಂಡ್ಸ್

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಕೇಂದ್ರ ಸರ್ಕಾರದ ಯೋಜನೆಗಳ ಕುರಿತು ಜಾಗೃತಿ ಮೂಡಿಸುವ ಆರ್ಥಿಕ ಸೇರ್ಪಡೆಪರಿಪೂರ್ಣತೆ ಅಭಿಯಾನ ಹಾವೇರಿ ಜಿಲ್ಲೆಯ ಹಳೆ ಬಂಕಾಪುರನಲ್ಲಿ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಕೇಂದ್ರ ಸರ್ಕಾರದ ವಿವಿಧ ಯೋಜನೆಗಳಾದ ಪ್ರಧಾನಮಂತ್ರಿ ಸುರಕ್ಷಾ ವಿಮಾ ಯೋಜನೆ, ಜೀವನ್ ಜ್ಯೋತಿ ವಿಮಾ ಯೋಜನೆ, ಅಟಲ್ ಪಿಂಚಣಿ ಯೋಜನೆ ಸೇರಿದಂತೆ

ವಿವಿಧ ಯೋಜನೆಗಳ ಕುರಿತು ಮಾಹಿತಿ ನೀಡಲಾಯಿತು. ಜೀವನ ಜ್ಯೋತಿ ಸುರಕ್ಷಾ ಯೋಜನೆಯ ಪ್ರಯೋಜನ ಕುರಿತು ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡ ಫಲಾನುಭವಿ ಹೇಮಾವತಿ ಪಾಟೀಲ...

ಧ್ವನಿ–ಹೇಮಾವತಿ ಪಾಟೀಲ–28 ಸೆಕೆಂಡ್ಸ್

*******

ಮ್ಯಾನ್‌ಹೋಲ್‌ಗಳನ್ನು ಸ್ವಚ್ಛಗೊಳಿಸಲು ರೂಪಿಸಿರುವ ವಿಶ್ವದ ಮೊದಲ ರೋಬೋಟಿಕ್ ಸ್ಕ್ಯಾವೆಂಜರ್ ಬ್ಯಾಂಡಿಕೂಟ್ ಯಂತ್ರದ ಬಳಕೆಗೆ ರಾಯಚೂರ ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮೊಹಪಾತ್ರ ನಿನ್ನೆ ಚಾಲನೆ ನೀಡಿದರು. ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿನ ಪಾಲಿಕೆಯ ಕಚೇರಿ ಮುಂದಿನ ರಸ್ತೆಯಲ್ಲಿನ ಮ್ಯಾನ್‌ಹೋಲ್‌ನ್ನು ನೂತನ ರೋಬೋಟಿಕ್ ಸ್ಕ್ಯಾವೆಂಜರ್ ಯಂತ್ರದ ಮೂಲಕ ಶುಚಿಗೊಳಿಸುವುದನ್ನು ಖುದ್ದು ವೀಕ್ಷಣೆ ನಡೆಸಿ ಮಾತನಾಡಿದ ಆಯುಕ್ತರು, ಕರ್ನಾಟಕ ರಾಜ್ಯದಲ್ಲಿಯೇ ಮೊಟ್ಟಮೊದಲ ಬಾರಿ ಈ ನೂತನ ಯಂತ್ರವನ್ನು ಬಳಕೆಗೆ ತಂದ ಹೆಗ್ಗಳಿಕೆಗೆ ರಾಯಚೂರ ಮಹಾನಗರ ಪಾಲಿಕೆ ಪಾತ್ರವಾಗಿದೆ ಎಂದರು. ಬ್ಯಾಂಡಿಕೂಟ್ ಕೇವಲ ಒಂದು ಯಂತ್ರವಲ್ಲ; ಇದು ಪ್ರಗತಿ, ಘನತೆ ಮತ್ತು ಸುರಕ್ಷತೆಯನ್ನು ಪ್ರತಿನಿಧಿಸುತ್ತದೆ. ರಾಯಚೂರನ್ನು ಸ್ವಚ್ಛ, ಸುರಕ್ಷಿತ ಮತ್ತು ಸುಂದರ ನಗರವನ್ನಾಗಿಸುವುದು ನಮ್ಮ ಗುರಿ ಎಂದು ಜಿಲ್ಲಾಧಿಕಾರಿ ಹೇಳಿದರು.

*******

ಬೆಲೆ ಕುಸಿತದಿಂದ ಕಂಗೆಟ್ಟಿರುವ ರಾಜ್ಯದ ಮಾವು ಬೆಳೆಗಾರರ ನೆರವಿಗೆ ದಾವಿಸಿರುವ ಸರ್ಕಾರ ಈ ಹಿಂದಿನ ಆದೇಶ ಮಾರ್ಪಡಿಸಿದ್ದು, ಬೆಂಬಲ ಬೆಲೆಯೊಂದಿಗೆ ಪ್ರತಿ ಎಕರೆಗೆ 40 ಕ್ವಿಂಟಾಲ್‌ನಂತೆ ಗರಿ ಷ್ಠ 5 ಎಕರೆಗೆ 200 ಕ್ವಿಂಟಾಲ್‌ವರೆಗೆ ಮಿತಿಗೊಳಿಸಿ ಖರೀದಿಸಲು ಆದೇಶ ಹೊರಡಿಸಿದೆ.ಈ ಆದೇಶವು ಸದರಿ ಯೋಜನೆಯಡಿ ಈಗಾಗಲೇ ನೋಂದಾಯಿಸಿರುವ ರೈತರಿಗೂ ಸಹ ಅನ್ವಯವಾಗಲಿದೆ. ಪ್ರತಿ ಕೆ.ಜಿ.ಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ತಲಾ 2 ರೂಪಾಯಿಗಳಂತೆ ಒಟ್ಟು 4 ರೂಪಾಯಿ ಬೆಂಬಲ ಬೆಲೆಯೊಂದಿಗೆ ಮಾವು ಖರೀದಿಗೆ ಈ ಹಿಂದೆ ಆದೇಶ ಹೊರಡಿಸಲಾಗಿತ್ತು.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ: ಮೇಲುಸ್ತುವಾರಿಗೆ ಉನ್ನತಮಟ್ಟದ ಸಮಿತಿ ರಚಿಸಲು ತಿರ್ಮಾನ.

ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ ಕಾರ್ಡ ವಿತರಿಸುವ ಅಂಬೇಡ್ಕರ್ ಕಾರ್ಮಿಕ ಸಹಾಯಹಸ್ತ ಯೋಜನೆ, ರಾಜ್ಯದ ಎಲ್ಲ ಜಿಲ್ಲೆಗಳಿಗೂ ವಿಸ್ತರಣೆ.

ರಾಜ್ಯದ ವಿವಿಧೆಡೆ ಮುಂದುವರಿದ ಆರ್ಥಿಕ ಸೇರ್ಪಡೆಪರಿಪೂರ್ಣತೆ ಅಭಿಯಾನ: ಕೇಂದ್ರ ಸರ್ಕಾರದ ಯೋಜನೆಗಳ ಕುರಿತು ಜಾಗೃತಿ.

ರಾಜ್ಯದಲ್ಲಿಯೇ ಮೊಟ್ಟಮೊದಲ ಬಾರಿ ರೋಬೋಟಿಕ್ ಸ್ಕ್ಯಾವೆಂಜರ್ ಬ್ಯಾಂಡಿಕೂಟ್ ಯಂತ್ರ, ಬಳಕೆಗೆ ತಂದ ರಾಯಚೂರ ಮಹಾನಗರಪಾಲಿಕೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********